# ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,
# ಹಿರಿಯ ಶ್ರೇಣಿ, ತೀರ್ಥಹಳ್ಳಿ
# ಸಿ.ಸಿ. ನಂ. 473/2024

| | | |
|---|---|---|
| ಸಾಕ್ಷಿದಾರರ ಹೆಸರು | ಚಂದ್ರಶೇಖರ | |
| ತಂದೆಯ ಹೆಸರು | ವೆಂಕಟಪ್ಪ ಗೌಡ | ಸಿಡಬ್ಲ್ಯೂ-8 |
| ವಯಸ್ಸು | 48 ವರ್ಷ | ಪಿಡಬ್ಲ್ಯೂ-5 |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಕಾಸರವಳ್ಳಿ | |

ದಿಃ22-08-2025 ರಂದು ಪ್ರಮಾಣಿಕರಿಸಲಾಯಿತು.

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಆರೋಪಿ ನನಗೆ ಪರಿಚಯ. ಸಾಕ್ಷಿಯು ನಿಪಿ-2 ನ್ನು ನೋಡಿ ಗುರುತಿಸಿದ್ದು, ನಿಪಿ-2 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಇ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಪೊಲೀಸರ ಕೋರಿಕೆಯ ಮೇರೆಗೆ ಹಾಕಿರುತ್ತೇನೆ. ನಿಪಿ-2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಮುದ್ದೆಮಾಲನ್ನು ಅಮಾನತ್ತುಪಡಿಸಿಕೊಂಡಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಎಪಿಪಿಯವರು ಅನುಮತಿ ಕೋರಿರುತ್ತಾರೆ. ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಎ.ಪಿ.ಪಿ. ಯವರಿಂದ**

ದಿಃ31.03.2024 ರಂದು ರಾತ್ರಿ 07.45 ಗಂಟೆಗೆ ನಾನು ಮತ್ತು ಚಾಸಾ-7 ರವರು ರಾಮಕೃಷ್ಣಪುರ ಸರ್ಕಲ್ ಬಳಿ ನಿಂತಿದ್ದಾಗ ಚಾಸಾ-4 ರವರು ಅಲ್ಲಿಗೆ ಬಂದು

ನನ್ನನ್ನು ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ–1 ರವರು ಕಾಸರವಳ್ಳಿ ಗ್ರಾಮದಲ್ಲಿರುವ ದಿನೇಶ್ ರವರ ಕಿರಾಣಿ ಅಂಗಡಿ ಎದುರು ಸಾರ್ವಜನಿಕ ಸ್ಥಳದಲ್ಲಿ ಸಾರ್ವಜನಿಕರಿಗೆ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆ, ದಾಳಿ ಮಾಡಲು ಪಂಚರಾಗಿ ಸಹಕರಿಸಿ ಎಂದು ಕೇಳಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮಾಹಿತಿ ಬಂದ ಸ್ಥಳಕ್ಕೆ ಚಾಸಾ–1 ರಿಂದ ಚಾಸಾ3 ರವರು ಮತ್ತು ನಾನು ಮತ್ತು ಚಾಸಾ–7 ರವರು ಹೋಗಿ ದಾಳಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಕೂಡಲೇ ಸ್ಥಳದಲ್ಲಿದ್ದ ಸಾರ್ವಜನಿಕರು ಮತ್ತು ಮದ್ಯ ಮಾರಾಟ ಮಾಡುತ್ತಿದ್ದ ವ್ಯಕ್ತಿ ಓಡಿಹೋಗಿರುತ್ತಾರೆ ಎಂದರೆ ಸರಿಯಲ್ಲ. ನಂತರ ಸ್ಥಳದಲ್ಲಿದ್ದ ಚಾಸಾ–6 ರವರನ್ನು ವಿಚಾರಿಸಿರುತ್ತೇವೆ ಎಂದರೆ ಸರಿಯಲ್ಲ. ನಂತರ ಸದರಿ ವ್ಯಕ್ತಿಯು ಆರೋಪಿಗೆ ಮದ್ಯವನ್ನು ಮಾರಾಟ ಮಾಡಲು ಪರವಾನಗಿ ಇದೆಯೇ ಎಂದು ಕೇಳಿದಾಗ, ಪರವಾನಗಿ ಇಲ್ಲ ಎಂದು ತಿಳಿಸಿರುತ್ತಾನೆ ಎಂದರೆ ಸರಿಯಲ್ಲ. ನಂತರ ಸ್ಥಳ ಪರಿಶೀಲಿಸಿದಾಗ ಸ್ಥಳದಲ್ಲಿ 90 ಎಂ.ಎಲ್. ನ ಓರಿಜಿನಲ್ ಚಾಯ್ಸ್ ನ 37 ಟೆಟ್ರಾ ಪ್ಯಕುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮದ್ಯವನ್ನು ರಾತ್ರಿ 08.25 ರಿಂದ 09.25 ರವರೆಗೆ ಅಮಾನತ್ತುಪಡಿಸಿಕೊಂಡು ಪಂಚನಾಮೆ ಬರೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಗೆ ನಾನು ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು 31.03.2024 ರಂದು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ–7 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ನಾನು ಈಗ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**ತೆ ನ್ಯಾ ಬೆ ಮಾಡಲಾಯಿತು.**

**ಓ ಹೇ ಕೇ ಸರಿಯಿದೆ.**

**(ಗೀತಾಮಣಿ)**
**ಹಿರಿಯ ವ್ಯವಹಾರ ನ್ಯಾಯಾಧೀಶರು,**
**ತೀರ್ಥಹಳ್ಳಿ**